# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 917 |
| 2. | ಸದಸ್ಯರ ಹೆಸರು | : | ಶ್ರೀ ಅರುಣ ಶಹಾಪೂರ |
| 3. | ಉತ್ತರಿಸಬೇಕಾದ ದಿನಾಂಕ | : | 18.12.2018 |
| 4. | ಉತ್ತರಿಸಬೇಕಾದ ಸಚಿವರು | : | ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಬೆಂಗಳೂರು ಮೆಡಿಕಲ್ ಕಾಲೇಜು ಮತ್ತು ರಿಸರ್ಚ್ ಇನ್ಸಿಟ್ಯೂಟ್‌ನ ವಿವಿಧ ವೃಂದದ ಸಿಬ್ಬಂದಿಗಳಿಗೆ ಸರಿಯಾದ ಸಮಯಕ್ಕೆ ವೇತನ ನೀಡದೇ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ |
| (ಆ) | ಯಾವ ಕಾರಣಕ್ಕಾಗಿ ವೇತನ ನೀಡಲು ವಿಳಂಬವಾಗುತ್ತಿದೆ, ಇರುವ ಸಮಸ್ಯೆಗಳೇನು; ಈ ಸಮಸ್ಯೆಗಳನ್ನು ಸರಿಪಡಿಸಿ ಪ್ರತಿ ತಿಂಗಳು ಸರಿಯಾದ ಸಮಯಕ್ಕೆ ವೇತನ ನೀಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ ಹಾಗೂ ತೆಗೆದುಕೊಳ್ಳಲು ಇಚ್ಛಿಸಿರುವ ಕ್ರಮಗಳೇನು? | ಈ ಸಂಸ್ಥೆಯ ಸಿಬ್ಬಂದಿಗಳ ವೇತನಕ್ಕಾಗಿ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ರೂ.157.08 ಕೋಟಿಗಳನ್ನು ಒದಗಿಸಲಾಗಿದ್ದು, ಈಗಾಗಲೇ ಪ್ರತಿ ತ್ರೈಮಾಸಿಕದಲ್ಲಿ ರೂ.39.27 ಕೋಟಿಗಳಂತೆ ಡಿಸೆಂಬರ್-2018 ರ ಮಾಹೆಯವರೆಗಿನ ಮೂರು ತ್ರೈಮಾಸಿಕ ಕಂತುಗಳನ್ನು ಬಿಡುಗಡೆಗೊಳಿಸಲಾಗಿದೆ.<br><br>ಅದೇ ರೀತಿ ಗುತ್ತಿಗೆ/ಹೊರಗುತ್ತಿಗೆ ನೌಕರರ ವೇತನ ಪಾವತಿಗೆ ರೂ.28.42 ಕೋಟಿಗಳನ್ನು ಒದಗಿಸಲಾಗಿದ್ದು, ಪ್ರತಿ ತ್ರೈ ಮಾಸಿಕದಲ್ಲಿ ರೂ.7.1050 ಕೋಟಿಗಳಂತೆ ಡಿಸೆಂಬರ್-2018 ರ ಮಾಹೆಯವರೆಗೆ ಮೂರು ತ್ರೈ ಮಾಸಿಕ ಕಂತುಗಳನ್ನು ಬಿಡುಗಡೆಗೊಳಿಸಲಾಗಿದೆ. ಇದರಿಂದಾಗಿ ಈ ಸಂಸ್ಥೆಯ ಸಿಬ್ಬಂದಿಗಳ ವೇತನ ಪಾವತಿಯಲ್ಲಿ ಯಾವುದೇ ವಿಳಂಬವಾಗದಂತೆ ಕ್ರಮವಹಿಸಲಾಗಿದೆ. |

ಸಂಖ್ಯೆ: ಆಕುಕ 498 ಎಂಎಂಸಿ 2018

(ಡಿ.ಕೆ.ಶಿವಕುಮಾರ್)
ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು